# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಲಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 168 | Pages. 2 | Date: 11-06-2026, THURSDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 168 – ಪುಟಗಳು : 2 | 11-06-2026 | ಗುರುವಾರ | Ph: 8762954248 | ದರ : ₹1


# ಜಿಲ್ಲಾ ಕೇಂದ್ರ ಹಾಸನದಲ್ಲಿ ಸರಣಿ ಪ್ರತಿಭಟನೆ

## ಕಚ್ಚಾತೈಲ ಬೆಲೆ ಏರಿಕೆಗೆ ಖಂಡನೆ | ಅಂತರ್ಜಾತಿ ವಿವಾಹ ಪ್ರೋತ್ಸಾಹ ಧನಕ್ಕೆ ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಬುಧವಾರ ನಗರದಲ್ಲಿ ಸರಣಿ ಪ್ರತಿಭಟನೆಗಳು ನಡೆದವು.

ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ (ಗ್ಯಾಸ್) ಮತ್ತು ಅಗತ್ಯ ವಸ್ತುಗಳ ಬೆಲೆ ಏರಿಕೆ, ಜನದ್ರೋಹಿ ನಡೆ ವಿರೋಧಿಸಿ ಸಿಪಿಐ(ಎಂ) ಕಾರ್ಯಕರ್ತರು ಪ್ರಧಾನಿ ನರೇಂದ್ರ ಮೋದಿ ಅವರು ಪ್ರತಿಕೃತಿ ದಹಿಸಿ ಪ್ರತಿಭಟನೆ ನಡೆಸಿದರು.

ಪಂಚ ರಾಜ್ಯಗಳ ಚುನಾವಣೆ ನಂತರ ದೇಶಾದ್ಯಂತ ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ ಮತ್ತು ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿರುವ ಕೇಂದ್ರ ಸರ್ಕಾರ ಜನ ವಿರೋಧಿ ನೀತಿ ಅನುಸರಿಸುತ್ತಿದೆ ಎಂದು ಆರೋಪಿಸಿದರು.

ಚುನಾವಣೆ ಸಂದರ್ಭದಲ್ಲಿ ಸಾಕಷ್ಟು ದಾಸ್ತಾನಿದೆ, ಜನರು ಆತಂಕಪಡಬೇಕಿಲ್ಲ ಎಂದು ಹೇಳಿದ್ದ ಸರ್ಕಾರ, ಫಲಿತಾಂಶ ಹೊರಬಂದ ತಕ್ಷಣವೇ ಇಂಧನ ದರ ಏರಿಕೆ ಮಾಡಿ ಜನರ ಮೇಲೆ ಹೊರೆ ಹಾಕಿದೆ. ಇದಕ್ಕಿಂತ ದೊಡ್ಡ ಜನವಿರೋಧಿ ನಡೆ ಮತ್ತೊಂದಿಲ್ಲ. ಬೆಲೆ ಏರಿಕೆಯಿಂದ ಈಗಾಗಲೇ ಸಂಕಷ್ಟದಲ್ಲಿರುವ ಜನರ ಬೆನ್ನು ಮುರಿಯುವ ಕೆಲಸವನ್ನು ಮೋದಿ ಸರ್ಕಾರ ಮಾಡುತ್ತಿದೆ ಎಂದು ಆಕ್ರೋಶ ಹೊರ ಹಾಕಿದರು.

ಇಷ್ಟೊಂದು ದೊಡ್ಡ ಪ್ರಮಾಣದ ಬೆಲೆ ಏರಿಕೆಯಿಂದ ಸಾಮಾನ್ಯ ಜನ ತತ್ತರಿಸುತ್ತಿದ್ದಾರೆ. ಒಮ್ಮೆ ತೈಲ ಬೆಲೆ ಹೆಚ್ಚಳವಾದರೆ ಅದಕ್ಕೆ ಪೂರಕವಾಗಿ ಎಲ್ಲಾ ಅಗತ್ಯ ವಸ್ತುಗಳ ಬೆಲೆಗಳೂ ಗಗನಕ್ಕೇರುತ್ತವೆ. ಆದರೆ ರೈತ, ಕಾರ್ಮಿಕರ ಮತ್ತು ಜನಸಾಮಾನ್ಯರ ಆದಾಯದಲ್ಲಿ ಯಾವುದೇ ಏರಿಕೆ ಕಾಣದೆ ಬೆಲೆ ಏರಿಕೆ ಬಡವರ ಬದುಕನ್ನು ದುಸ್ತರಗೊಳಿಸಿದೆ ಎಂದು ದೂರಿದರು.

ಪ್ರಧಾನಿ ಅವರು ಅಮೆರಿಕದ ಹಿಂಬಾಲಕ ನಾಯಕನಂತೆ ವರ್ತಿಸಿ, ಇಸ್ರೇಲ್ ಪರ ನಿಲುವು ತೆಗೆದುಕೊಳ್ಳುತ್ತಿದ್ದಾರೆ. ಅನೇಕ ದೇಶಗಳು ತಮ್ಮ ನಾಗರಿಕರ ಹಿತರಕ್ಷಣೆಗಾಗಿ ಪೆಟ್ರೋಲಿಯಂ ಉತ್ಪನ್ನಗಳ ಬೆಲೆ ನಿಯಂತ್ರಣ ಕ್ರಮ ಕೈಗೊಂಡಿವೆ. ಆದರೆ ಭಾರತದಲ್ಲಿ ಜನಸಾಮಾನ್ಯರ ಬದುಕಿನ ಮೇಲೆ ಹೆಚ್ಚುವರಿ ಹೊರೆ ಹಾಕಲಾಗುತ್ತಿದೆ ಎಂದು ಧಿಕ್ಕಾರ ಕೂಗಿದರು.

ಮಿತವ್ಯಯದ ಬಗ್ಗೆ ಜನರಿಗೆ ಪಾಠ ಹೇಳುವ ಪ್ರಧಾನಿ, ಮತ್ತೊಂದೆಡೆ ರೋಡ್ ಶೋ ಹಾಗೂ ವೈಮಾನಿಕ



ಪ್ರದರ್ಶನಗಳಲ್ಲಿ ಭಾಗವಹಿಸುತ್ತಿರುವುದು ಜನರ ನೋವನ್ನು ಅವಹೇಳನ ಮಾಡುವಂತಿದೆ. ಬೆಲೆ ಏರಿಕೆ ಬದಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ವಿಧಿಸುತ್ತಿರುವ ತೆರಿಗೆಗಳನ್ನು ಕಡಿತಗೊಳಿಸಬೇಕಿತ್ತು. ಇಂಧನ ದರ ಏರಿಕೆಯ ಸಂಪೂರ್ಣ ಹೊರೆಯನ್ನು ಜನರ ಮೇಲೆ ಹಾಕಬಾರದು ಎಂದು ಒತ್ತಾಯಿಸಿದರು.ಪ್ರತಿಭಟನೆಯಲ್ಲಿ ಸಿಐಟಿಯು ಜಿಲ್ಲಾಧ್ಯಕ್ಷ ಧರ್ಮೇಶ್, ಜಿಲ್ಲಾ ಕಾರ್ಯದರ್ಶಿ ಹೆಚ್.ಆರ್. ನವೀನ್ ಕುಮಾರ್, ಸ್ಥಳೀಯ ಸಮಿತಿ ಕಾರ್ಯದರ್ಶಿ ಎಂ.ಜಿ.ಪೃಥ್ವಿ ಮೊದಲಾದವರಿದ್ದರು.

### ಜಮೀರ್ ಅಹಮದ್‌ಗೆ ಸಚಿವ ಸ್ಥಾನ ನೀಡಿ

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರದ ಮಂತ್ರಿ ಮಂಡಲದಲ್ಲಿ ನಾಲ್ವರು ಹಿರಿಯ ಮುಸ್ಲಿಂ ಶಾಸಕರಿಗೆ ಮಂತ್ರಿ ಸ್ಥಾನ ಹಾಗೂ ಸಮುದಾಯದ ಹಿರಿಯ ನಾಯಕ ಬಿ.ಝಡ್. ಜಮೀರ್ ಅಹಮದ್ ಖಾನ್ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ಜೊತೆಗೆ ಸಚಿವ ಸ್ಥಾನ ನೀಡುವಂತೆ ಆಗ್ರಹಿಸಿ ಜಿಲ್ಲಾ ಮುಸ್ಲಿಂ ಸಂಘಟನೆಗಳ ಒಕ್ಕೂಟದವರು ಪ್ರತಿಭಟನೆ ನಡೆಸಿದರು.

ನಗರದ ಹೇಮಾವತಿ ಪ್ರತಿಮೆ ಬಳಿಯಿಂದ ಮೆರವಣಿಗೆ ಹೊರಟ ನೂರಾರು ಮಂದಿ ಎನ್.ಆರ್.ವೃತ್ತದ ಮೂಲಕ ಜಿಪಂ ಎದುರಿನ ಅಂಬೇಡ್ಕರ್ ಪ್ರತಿಮೆವರೆಗೆ ಮೆರವಣಿಗೆ ನಡೆಸಿದರು.

ರಾಜ್ಯದಲ್ಲಿ ಮುಸ್ಲಿಂ ಸಮುದಾಯದ ಜನಸಂಖ್ಯೆ ಸುಮಾರು 84 ಲಕ್ಷ ದಾಟಿ ಬೆಳೆಯುತ್ತಿದೆ. ಹಿಂದಿನಿಂದಲೂ ಮುಸ್ಲಿಂ ಸಮುದಾಯ ಕಾಂಗ್ರೆಸ್ ಪಕ್ಷವನ್ನು ಬೇಷರತ್ ಬೆಂಬಲಿಸುತ್ತಾ ಬಂದಿದ್ದು, ಚುನಾವಣಾ ಸಂದರ್ಭಗಳಲ್ಲಿ ಕಾಂಗ್ರೆಸ್ ಪರವಾಗಿ ಕೆಲಸ ಮಾಡುತ್ತಾ ಸುಮಾರು 9 ಜನ ಮುಸ್ಲಿಂ ಸಮುದಾಯದ ಶಾಸಕರನ್ನು ಗೆಲ್ಲಿಸಿದೆ. ಜೊತೆಗೆ ನಾಲ್ವರು ವಿಧಾನ ಪರಿಷತ್ ಸದಸ್ಯರು ಸರ್ಕಾರದ ಪರವಾಗಿದ್ದು ಒಟ್ಟು 13 ಸದಸ್ಯರು ಸರ್ಕಾರದ ಪರವಾಗಿದ್ದಾರೆ.

ಹೊಸ ಮಂತ್ರಿ ಮಂಡಲದಲಿ ನಮ್ಮ ಸಮುದಾಯದ ಒಬ್ಬ ಪ್ರತಿನಿಧಿಗೆ ಅವಕಾಶ ನೀಡಲಾಗಿದೆ. ಇದು ರಾಜ್ಯದ ಮುಸ್ಲಿಂ ಸಮುದಾಯಕ್ಕೆ ಬೇಸರ ತರಿಸಿದ್ದು, ಇನ್ನೂ ಕನಿಷ್ಠ 3-4 ಮಂದಿಗೆ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು.

ಶೇ.14 ರಷ್ಟಿರುವ ಮುಸ್ಲಿಂ ಸಮುದಾಯ ಶೇ.80ಕ್ಕೂ ಹೆಚ್ಚು ಮತಗಳನ್ನು ಕಾಂಗ್ರೆಸ್ ಪಕ್ಷಕ್ಕೆ ನೀಡಿದೆ. ಮುಸ್ಲಿಂ ಸಮುದಾಯದ ಅಭ್ಯುದಯಕ್ಕಾಗಿ ಸುಮಾರು 5 ಜನ ನಮ್ಮ ಸಮುದಾಯದ ಪ್ರತಿನಿಧಿಗಳು ಸರ್ಕಾರದ ಮಂತ್ರಿ ಮಂಡಲದಲ್ಲಿ ಇರುವುದು ಅವಶ್ಯಕ ಎಂದರು. ಆದ್ದರಿಂದ ಜಮೀರ್ ಅಹಮದ್ ಖಾನ್ ಅವರಿಗೆ ಮೊದಲ ಅವಧಿಯಲ್ಲೇ ಮಂತ್ರಿಸ್ಥಾನ ಜೊತೆಗೆ ಡಿಸಿಎಂ ಮಾಡಬೇಕಿತ್ತು. ಇದೂ ನಮಗೆ ಬೇಸರ ತರಿಸಿದ್ದು, ಮುಂದೆ ಜಮೀರ್ ಅಹಮದ್ ಸೇರಿ ನಾಲ್ವರು ಮುಸ್ಲಿಂ ಶಾಸಕರಿಗೆ ಅವಕಾಶ ನೀಡಬೇಕು. ಜೊತೆಗೆ ಹಿರಿಯ ನಾಯಕರನ್ನು ಡಿಸಿಎಂ ಮಾಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ವಕೀಲ ಅನ್‌ಷದ್ ಪಾಳ್ಯ, ಒಕ್ಕೂಟದ ಅಧ್ಯಕ್ಷ ಯೂಸುಫ್‌ಖಾನ್, ಗೌರವಾಧ್ಯಕ್ಷ ಅಮೀರ್ ಜಾನ್, ನವೀದ್, ಜಿಲ್ಲಾ ಸಂಚಾಲಕ ಸಮೀರ್ ಖಾನ್, ಅತೀಖುರ್ ರೆಹಮಾನ್, ಸಮೀರ್ ಅಹಮದ್ ಮೊದಲಾದವರಿದ್ದರು.

### ದಲಿತ ಹಕ್ಕುಗಳ ಸಮಿತಿಯಿಂದ ಪ್ರತಿಭಟನೆ

ದಲಿತ ಹಕ್ಕುಗಳ ಸಮಿತಿ ಕರ್ನಾಟಕ (ಡಿ.ಹೆಚ್.ಎಸ್.)




ಜಿಲ್ಲಾ ಸಮಿತಿಯ ನೇತೃತ್ವದಲ್ಲಿ ದೌರ್ಜನ್ಯಕ್ಕೊಳಗಾದ ದಲಿತರಿಗೆ ಬಾಕಿ ಇರುವ ಪರಿಹಾರ ಧನ ಹಾಗೂ ಅಂತರ್ಜಾತಿ ವಿವಾಹಿತರಿಗೆ ನೀಡಬೇಕಿರುವ ಪ್ರೋತ್ಸಾಹ ಧನವನ್ನು ತಕ್ಷಣ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿ ನಗರದ ಜಿಲ್ಲಾಧಿಕಾರಿ ಕಛೇರಿ ಆವರಣದಲ್ಲಿ ಪ್ರತಿಭಟನೆ ನಡೆಸಿ ಜಿಲ್ಲಾಡಳಿತದ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಡಿಹೆಚ್‌ಎಸ್ ಜಿಲ್ಲಾ ಸಂಚಾಲಕ ಎಂ.ಜಿ. ಪೃಥ್ವಿ ಮಾತನಾಡಿ, ರಾಜ್ಯದಲ್ಲಿ ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳು ಹೆಚ್ಚುತ್ತಿದ್ದು, ಸಂತ್ರಸ್ತರಿಗೆ ಕಾನೂನುಬದ್ಧವಾಗಿ ದೊರೆಯಬೇಕಾದ ಪರಿಹಾರ ಧನ ವಿತರಣೆಯಲ್ಲಿ ವಿಳಂಬವಾಗುತ್ತಿರುವುದು ಖಂಡನೀಯ ಎಂದರು.

ಜಿಲ್ಲೆಯಲ್ಲಿ ಕಳೆದ ವರ್ಷ ದಾಖಲಾಗಿರುವ ದೌರ್ಜನ್ಯ ಪ್ರಕರಣಗಳಲ್ಲಿ 52 ಸಂತ್ರಸ್ತ ಕುಟುಂಬಗಳು ಹಾಗೂ 22 ಪಿಂಚಣಿದಾರರಿಗೆ ಸೇರಬೇಕಾದ ಸುಮಾರು 1.23 ಕೋಟಿ ಪರಿಹಾರ ಇನ್ನೂ ಬಾಕಿ ಇದೆ ಎಂದು ಆರೋಪಿಸಿದರು. ಅಂತರ್ಜಾತಿ ವಿವಾಹಿತರಿಗೆ ನೀಡಬೇಕಾದ ಪ್ರೋತ್ಸಾಹ ಧನವೂ ವಿಳಂಬವಾಗಿದ್ದು, ಜಿಲ್ಲೆಯಲ್ಲಿ 428 ಅಂತರ್ಜಾತಿ ವಿವಾಹಗಳು, 33 ಒಳಪಂಗಡಗಳ ವಿವಾಹಗಳು ಹಾಗೂ ಇಬ್ಬರು ವಿಧವಾ ಮರುವಿವಾಹಿತರ ಸೇರಿ ಒಟ್ಟು ಫಲಾನುಭವಿಗಳಿಗೆ ಸುಮಾರು 11.90 ಕೋಟಿ ಪ್ರೋತ್ಸಾಹ ಧನ ವಿತರಣೆ ಆಗಿಲ್ಲ ಎಂದು ತಿಳಿಸಿದರು.

ಪ್ರತಿಭಟನೆಯಲ್ಲಿ ಡಿಹೆಚ್‌ಎಸ್ ಜಿಲ್ಲಾ ಸಂಚಾಲಕ ಎಂ.ಜಿ.ಪೃಥ್ವಿ, ಸಿಪಿಐಎಂ ಜಿಲ್ಲಾ ಕಾರ್ಯದರ್ಶಿ ನವೀನ್ ಕುಮಾರ್, ಸಿಐಟಿಯು ಜಿಲ್ಲಾಧ್ಯಕ್ಷ ಧರ್ಮೇಶ್ ಮತ್ತಿತರರಿದ್ದರು.

## ದೀರ್ಘಾವಧಿ ಪ್ರಧಾನಿಯಾಗಿ ಮೋದಿ: ವಿಶೇಷ ಪೂಜೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ದೇಶದ ಪ್ರಧಾನಿಯಾಗಿ 12 ವರ್ಷಗಳ ಸೇವಾ ಪಯಣ ಪೂರ್ಣಗೊಳಿಸಿರುವ ಪ್ರಧಾನಿ ನರೇಂದ್ರ ಮೋದಿ ಅವರ ದೀರ್ಘಾಯುಷ್ಯ, ಆರೋಗ್ಯ ಹಾಗೂ ದೇಶವನ್ನು ಮತ್ತಷ್ಟು ಶಕ್ತಿಯುತವಾಗಿ ಮುನ್ನಡೆಸುವ ಸಾಮರ್ಥ್ಯ ದೊರಕಲಿ ಎಂದು ಶಾಸಕ ಸಿಮೆಂಟ್ ಮಂಜು ಪ್ರಾರ್ಥಿಸಿದರು.

ಪಟ್ಟಣದ ಶ್ರೀ ಸಕಲೇಶ್ವರ ಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿ ಮಾತನಾಡಿದ ಅವರು, ದೇಶದ ನಾಯಕತ್ವ ಎಂದರೆ ಕೇವಲ ಆಡಳಿತವಲ್ಲ, ಅದು ಕೋಟ್ಯಂತರ ಜನರ ಆಶಯ ಮತ್ತು ನಿರೀಕ್ಷೆಗಳನ್ನು ಹೊತ್ತು ಸಾಗುವ ಜವಾಬ್ದಾರಿ. ಆ ಜವಾಬ್ದಾರಿಯನ್ನು ಪ್ರಧಾನಿ ನರೇಂದ್ರ ಮೋದಿ ಅವರು ಕಳೆದ 12 ವರ್ಷಗಳಿಂದ



ಸಮರ್ಥವಾಗಿ ನಿರ್ವಹಿಸುತ್ತಿದ್ದಾರೆ ಎಂದು ಹೇಳಿದರು.

ದೇಶದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಸೌಲಭ್ಯಗಳು ತಲುಪಬೇಕು ಎಂಬ ಉದ್ದೇಶದಿಂದ ಕೇಂದ್ರ ಸರ್ಕಾರ ಹಲವು ಜನಪರ ಯೋಜನೆಗಳನ್ನು ಜಾರಿಗೆ ತಂದಿದೆ. ಮಹಿಳೆಯರ ಸಬಲೀಕರಣಕ್ಕಾಗಿ ಮನೆ ಮನೆಗೆ ಶೌಚಾಲಯ ನಿರ್ಮಾಣ, ಜಲ್ ಜೀವನ್ ಮಿಷನ್ ಮೂಲಕ ಕುಡಿಯುವ ನೀರಿನ ವ್ಯವಸ್ಥೆ, ಉಜ್ವಲ ಯೋಜನೆಯಡಿ ಅಡುಗೆ ಅನಿಲ ಸಂಪರ್ಕ, ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ವಸತಿ ಸೌಲಭ್ಯ, ಆಯುಷ್ಮಾನ್ ಭಾರತ್ ಯೋಜನೆಯಡಿ ಆರೋಗ್ಯ ರಕ್ಷಣೆ ಹಾಗೂ ಜನಧನ್ ಯೋಜನೆಯ ಮೂಲಕ ಬ್ಯಾಂಕಿಂಗ್ ಸೇವೆಗಳನ್ನು ಸಾಮಾನ್ಯ ಜನರಿಗೆ ತಲುಪಿಸಲಾಗಿದೆ ಎಂದು ಹೇಳಿದರು.

ರೈತರ ಆರ್ಥಿಕ ಬಲವರ್ಧನೆಗಾಗಿ ಪಿಎಂ ಕಿಸಾನ್ ಸಮ್ಮಾನ್ ನಿಧಿ, ಸಣ್ಣ ವ್ಯಾಪಾರಿಗಳು ಹಾಗೂ ಯುವ ಉದ್ಯಮಿಗಳಿಗೆ ಮುದ್ರಾ ಯೋಜನೆ, ದೇಶವನ್ನು ಡಿಜಿಟಲ್ ವ್ಯವಸ್ಥೆಯತ್ತ ಕೊಂಡೊಯ್ಯಲು ಡಿಜಿಟಲ್ ಇಂಡಿಯಾ, ಸ್ವಚ್ಛತೆ ಮತ್ತು ಸಾರ್ವಜನಿಕ ಆರೋಗ್ಯಕ್ಕಾಗಿ ಸ್ವಚ್ಛ ಭಾರತ್ ಅಭಿಯಾನ, ದೇಶೀಯ ಉತ್ಪಾದನೆ ಹಾಗೂ ಉದ್ಯೋಗ ಸೃಷ್ಟಿಗೆ ಮೇಕ್ ಇನ್ ಇಂಡಿಯಾ ಸೇರಿದಂತೆ ಹಲವು ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗಿದೆ ಎಂದು ತಿಳಿಸಿದರು.

ಭಾರತವು ಜಾಗತಿಕ ಮಟ್ಟದಲ್ಲಿ ತನ್ನ ಪ್ರಭಾವವನ್ನು ಹೆಚ್ಚಿಸಿಕೊಳ್ಳುವ ದಿಸೆಯಲ್ಲಿ ಅಭಿವೃದ್ಧಿ, ಮೂಲಸೌಕರ್ಯ, ತಂತ್ರಜ್ಞಾನ ಹಾಗೂ ಜನಕಲ್ಯಾಣ ಕಾರ್ಯಕ್ರಮಗಳ ಮೂಲಕ ಹೊಸ ಹೆಜ್ಜೆ ಇಡುತ್ತಿದೆ. ಪ್ರಧಾನಿ ಮೋದಿ ಅವರಿಗೆ ಭಗವಂತ ಇನ್ನಷ್ಟು ಆರೋಗ್ಯ, ಆಯುಷ್ಯ ಹಾಗೂ ದೇಶಸೇವೆಯ ಶಕ್ತಿ ನೀಡಲಿ. ಭಾರತ ಇನ್ನಷ್ಟು ಅಭಿವೃದ್ಧಿ ಹೊಂದಿ ವಿಶ್ವದ ಬಲಿಷ್ಠ ರಾಷ್ಟ್ರವಾಗಿ ಹೊರಹೊಮ್ಮಲಿ ಎಂಬುದು ಪ್ರಾರ್ಥನೆಯಾಗಿದೆ ಎಂದು ಹೇಳಿದರು.

## ಜೂ.14 ರಂದು ಪ್ರತಿಭಾ ಪುರಸ್ಕಾರ-ಸಾಧಕರಿಗೆ ಸನ್ಮಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲಾ ಸರ್ಕಾರಿ, ಅರೆ ಸರ್ಕಾರಿ ಹಾಗೂ ನಿಗಮ ಮಂಡಳಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ಹಾಗೂ ಜಿಲ್ಲಾ ರಾಜ್ಯ ಸರ್ಕಾರಿ ನೌಕರರ ಕೋ ಆಪರೇಟಿವ್ ಸೊಸೈಟಿ ಸದಸ್ಯರ ಮಕ್ಕಳಿಗೆ ಜೂ.14 ರಂದು ಪ್ರತಿಭಾ ಪುರಸ್ಕಾರ ಹಾಗೂ ಸರ್ವ ಸದಸ್ಯರ ಸಾಮಾನ್ಯ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ಗೃಹ ನಿರ್ಮಾಣ ಸಹಕಾರ ಸಂಘದ ಅಧ್ಯಕ್ಷ ಕೆ.ಎಂ. ಶ್ರೀನಿವಾಸ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿ, ಅಂದು ಬೆಳಗ್ಗೆ 10.30ಕ್ಕೆ ನಗರದ ಕಲಾಭವನದಲ್ಲಿ ನಡೆಯುವ ಕಾರ್ಯಕ್ರಮವನ್ನು ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಶಂಭುನಾಥ ಸ್ವಾಮೀಜಿ ಉದ್ಘಾಟಿಸಲಿದ್ದಾರೆಂದರು.




ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್.ಷಡಾಕ್ಷರಿ ಗೌರವ ಉಪಸ್ಥಿತಿ ವಹಿಸಲಿದ್ದು, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ, ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭಾನ್ವಿತಾ, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಶುಭಂ ಶುಕ್ಲ ಭಾಗವಹಿಸುವರು. ವಿದ್ಯಾರ್ಥಿಗಳಿಗೆ ಸ್ಫೂರ್ತಿದಾಯಕ ಹಾಗೂ ಪ್ರೇರಣಾ ನುಡಿಗಳನ್ನು ಶಿವಮೊಗ್ಗದ ವೈದ್ಯರು, ಲೇಖಕರು, ಮೋಟಿವೇಶನಲ್ ಸ್ಪೀಕರ್ ಡಾ.ರಾಹುಲ್ ದೇವರಾಜ್ ಅವರು ಆಡುವರು, ಇವರಿಗೆ ಸ್ಫೂರ್ತಿ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ ಎಂದರು.

ಎಸ್‌ಎಸ್‌ಎಲ್‌ಸಿ-ಪಿಯುಸಿ ಪರೀಕ್ಷೆಯಲ್ಲಿ ಅತಿಹೆಚ್ಚು ಅಂಕ ಪಡೆದು ಜಿಲ್ಲೆಯ ಕೀರ್ತಿ ಹೆಚ್ಚಿಸಿರುವ 250 ಮಕ್ಕಳನ್ನು ಅಂದು ಸನ್ಮಾನಿಸಲಾಗುವುದು.ಹಾಗೆಯೇ ಜಿಲ್ಲೆಯಲ್ಲಿ ಉತ್ತಮ ಸೇವೆ ಸಲ್ಲಿಸಿರುವ 15 ಮಂದಿ ಶಿಕ್ಷಕರಿಗೆ ಸರ್ವೋತ್ತಮ ಸೇವಾ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದರು.

ಇದರ ಜೊತೆಗೆ ಸಂಘದ ಸದಸ್ಯತ್ವ ಪಡೆದು ನಿವೃತ್ತರಾದ ನೌಕರರಿಗೆ, 2025ನೇ ಸಾಲಿನ ಯುಪಿಎಸ್‌ಸಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರುವ ಜಿಲ್ಲೆಯ ಸಾಧಕರಿಗೆ, ರಾಜ್ಯಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟದಲ್ಲಿ ಪ್ರಶಸ್ತಿ ಗೆದ್ದು ಸಾಧನೆ ಮಾಡಿರುವ ನೌಕರರನ್ನೂ ಇದೇ ಸನ್ಮಾನಿಸಿ ಅಭಿನಂದಿಸಲಾಗುವುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಕೋ ಆಪರೇಟಿವ್ ಸೊಸೈಟಿ ಅಧ್ಯಕ್ಷ ಎಂ.ಎನ್.ಪರಮೇಶ್, ಉಪಾಧ್ಯಕ್ಷರಾದ ಲೋಕೇಶ್ ಕುಮಾರ್, ಧರ್ಮ ಬಿ.ಆರ್., ಗೌರವಾಧ್ಯಕ್ಷ ವಿಶ್ವನಾಥ್ ಜಿ.ಪಿ., ನಿರ್ದೇಶಕರಾದ ಸುರೇಶ್, ಶಿವೇಗೌಡ, ಭೈರಪ್ಪನಾಯಕ ಮೊದಲಾದವರಿದ್ದರು.

## ಇಂದು ರಾಷ್ಟ್ರೀಯ ಲೋಕ ಅದಾಲತ್




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಜುಲೈ 11 ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ 4ನೇ ಅಧಿಕ ಮತ್ತು ಸತ್ರ ನ್ಯಾಯಾಧೀಶೆ ಎಂ.ಎಸ್.ಕಲ್ಪನಾ ಹೇಳಿದರು.

ಪಟ್ಟಣದ ಪತ್ರಕರ್ತರ ಭವನದಲ್ಲಿ ಆಯೋಜಿಸಿದ್ದ ಕಾನೂನು ಅರಿವು ಹಾಗೂ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿ, ದೀರ್ಘಕಾಲದಿಂದ ಬಾಕಿ ಉಳಿದಿರುವ ಪ್ರಕರಣ ಇತ್ಯರ್ಥಪಡಿಸಿಕೊಳ್ಳಲು ಅದಾಲತ್ ಸಹಕಾರಿಯಾಗಿದೆ ಎಂದರು.

ಜನಸಾಮಾನ್ಯರ ಸಮಯ ಮತ್ತು ಹಣವನ್ನು ಉಳಿಸುವ ಉದ್ದೇಶದಿಂದ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದೆ. ಉಭಯ ಪಕ್ಷಗಾರರು ಒಪ್ಪಿಗೆ ಸೂಚಿಸಿದರೆ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಲು ಇದು ನೆರವಾಗಲಿದೆ. ಸಣ್ಣಪುಟ್ಟ ವ್ಯಾಜ್ಯಗಳಿಗಾಗಿ ನ್ಯಾಯಾಲಯಕ್ಕೆ ಅಲೆದಾಡುತ್ತಿರುವ ಕಕ್ಷಿದಾರರ ಮನವೊಲಿಸಿ ರಾಜಿ ಸಂಧಾನದ ಮೂಲಕ ಪ್ರಕರಣ ಇತ್ಯರ್ಥ ಪಡಿಸಿಕೊಳ್ಳುವಂತೆ ಕಕ್ಷಿದಾರರಿಗೆ ಸಲಹೆ ನೀಡಬೇಕು ಎಂದು ತಿಳಿಸಿದರು.

ಜುಲೈ 11 ರಂದು ನಡೆಯುವ ಅದಾಲತ್‌ಗೆ ಅವರನ್ನು ಕರೆತಂದು ಪ್ರಕರಣ ಇತ್ಯರ್ಥ ಪಡಿಸಿಕೊಳ್ಳುವಂತೆ ತಿಳಿಸಬೇಕು. ಲೋಕ ಅದಾಲತ್‌ನಲ್ಲಿ ರಾಜಿಯಾಗಬಲ್ಲ ಅಪರಾಧಿಕ ಪ್ರಕರಣಗಳು, ಬ್ಯಾಂಕ್ ಸಾಲ ವಸೂಲಾತಿ, ಕೈಗಾರಿಕಾ ಮತ್ತು ಕಾರ್ಮಿಕ ವೇತನ ವಿವಾದಗಳು, ಗ್ರಾಹಕ ವೇದಿಕೆ ಪ್ರಕರಣಗಳು, ರಿಯಲ್ ಎಸ್ಟೇಟ್, ಚೆಕ್ ಅಮಾನ್ಯ, ಮೋಟಾರು ವಾಹನ ಅಪಘಾತ ಪರಿಹಾರ, ವಿದ್ಯುತ್ ಹಾಗೂ ನೀರಿನ ಶುಲ್ಕ, ಭೂಸ್ವಾಧೀನ, ಪಿಂಚಣಿ, ವೇತನ ಭತ್ಯೆ ಸೇರಿದಂತೆ ವಿವಿಧ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗುವುದು ಎಂದು ಮಾಹಿತಿ ನೀಡಿದರು.

## ಚ.ರಾ.ಪಟ್ಟಣದಲ್ಲಿ ಜೂ.13ಕ್ಕೆ ಟಗರು ಕಾಳಗ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೆಚ್ಚು ದಿನ ಮುಖ್ಯಮಂತ್ರಿಯಾಗಿ ಕರ್ತವ್ಯ ಪೂರೈಸಿರುವ ಹಿನ್ನೆಲೆಯಲ್ಲಿ ಪಟ್ಟಣದ ಸರ್ಕಾರಿ ಮಾಧ್ಯಮಿಕ ಶಾಲಾ ಆವರಣದಲ್ಲಿ ಜೂ.13 ರಂದು ರಾಜ್ಯಮಟ್ಟದ ಟಗರು ಕಾಳಗ ಏರ್ಪಡಿಸಲಾಗಿದೆ ಎಂದು ರಾಷ್ಟ್ರೀಯ ಅಹಿಂದ ಸಂಘಟನೆ ಜಿಲ್ಲಾಧ್ಯಕ್ಷ ಮಹೇಶ್ ಕಬ್ಬಾಳು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳೊಂದಿಗೆ ಜನಪರವಾದ ಕೆಲಸ ಮಾಡಿರುವ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಾರ್ಯವೈಖರಿಗೆ ಈ ಕಾರ್ಯಕ್ರಮವು ಸಾಕ್ಷಿಯಾಗಲಿದೆ. ಅವರ ರಾಜಕೀಯ ಬದುಕು ಶ್ರೇಷ್ಠವಾದುದು ಎಂದರು.




ಪಂದ್ಯಾವಳಿಗೆ ದಾವಣಗೆರೆ, ಹರಿಹರ, ರಾಣಿಬೆನ್ನೂರು, ಚಿತ್ರದುರ್ಗ, ಭದ್ರಾವತಿ ಸೇರಿ ವಿವಿಧೆಡೆಯಿಂದ 350ಕ್ಕೂ ಹೆಚ್ಚು ಕಾಳಗದ ಟಗರು ಭಾಗವಹಿಸಲಿವೆ. 2, 4 ಹಾಗು 8 ಹಲ್ಲುಗಳ ಆಧಾರದ ಮೇಲೆ ಸ್ಪರ್ಧೆ ನಡೆಯಲಿದೆ. ಮೊದಲಿಗೆ 2 ಹಲ್ಲಿನ ಟಗರು, 2ನೇ ಹಂತದಲ್ಲಿ 8 ಹಲ್ಲಿನ ಟಗರು ಹಾಗೂ ಕೊನೆಯ ಹಂತವಾಗಿ 4 ಹಲ್ಲಿನ ಟಗರುಗಳ ಸ್ಪರ್ಧೆ ನಡೆಸಲಾಗುವುದು.

2 ಹಲ್ಲಿನ ಟಗರಿಗೆ ತಲಾ 1 ಸಾವಿರ ರೂ., 8 ಹಲ್ಲಿನ ಟಗರಿಗೆ 2,500 ರೂ. ಹಾಗು 4 ಹಲ್ಲಿನ ಟಗರಿಗೆ 1,500 ರೂ. ಪ್ರವೇಶ ಶುಲ್ಕ ನಿಗದಿಪಡಿಸಲಾಗಿದೆ ಎಂದು ಮಾಹಿತಿ ನೀಡಿದರು.

ರಾಷ್ಟ್ರೀಯ ಅಹಿಂದ ಸಂಘಟನೆ ಜಿಲ್ಲಾ ಉಪಾಧ್ಯಕ್ಷ ಜಬಿವುಲ್ಲಾ ಬೇಗ್ ಅವರು ಮಾತನಾಡಿ, 2 ಹಲ್ಲಿನ ಕಾಳಗದಲ್ಲಿ ಪ್ರಥಮ ಬಹುಮಾನ 25 ಸಾವಿರ ರೂ., ದ್ವಿತೀಯ 15 ಸಾವಿರ ರೂ. ಹಾಗು ತೃತೀಯ ಬಹುಮಾನ 10 ಸಾವಿರ ರೂ., 6 ಹಲ್ಲಿನ ಕಾಳಗದಲ್ಲಿ ಪ್ರಥಮ ಬಹುಮಾನವಾಗಿ ಬೈಕ್, ದ್ವಿತೀಯ 40 ಸಾವಿರ ರೂ. ಮತ್ತು ತೃತೀಯ 25 ಸಾವಿರ ರೂ. ಹಾಗೂ 4 ಹಲ್ಲಿನ ಕಾಳಗದಲ್ಲಿ ಪ್ರಥಮ ಬಹುಮಾನವಾಗಿ ಎಲೆಕ್ಟ್ರಿಕ್ ಬೈಕ್, ದ್ವಿತೀಯ 25 ಸಾವಿರ ರೂ. ಹಾಗು ತೃತೀಯ ಸ್ಥಾನಕ್ಕೆ 15 ಸಾವಿರ ರೂ. ನೀಡಲಾಗುವುದು ಎಂದು ಹೇಳಿದರು.

ಕಾರ್ಯಕ್ರಮವು ಜೂ.13 ರಂದು ಬೆಳಗ್ಗೆ 10.30ಕ್ಕೆ ಪ್ರಾರಂಭವಾಗಲಿದು, ಮಾಜಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ, ಸಂಸದ ಶ್ರೇಯಸ್ ಪಟೇಲ್, ಅರಸೀಕೆರೆ ಶಾಸಕ ಕೆ.ಎಂ.ಶಿವಲಿಂಗೇಗೌಡ ಸೇರಿ ವಿವಿಧ ಗಣ್ಯರು ಪಾಲ್ಗೊಳ್ಳಲಿದ್ದಾರೆ ಎಂದರು.

ರಾಷ್ಟ್ರೀಯ ಅಹಿಂದ ಸಂಘಟನೆಯ ಪದಾಧಿಕಾರಿಗಳಾದ ಆನ್ಸರ್ ಬೇಗ್, ಬಾಲು, ಹರೀಶ್ ಇತರರಿದ್ದರು.

# ಅರಕಲಗೂಡಿನಲ್ಲಿ ಭೀತಿ ಹುಟ್ಟಿಸಿದ ಚಿರತೆ ಸಂಚಾರ

## ಜಮೀನಿಗೆ ಹೋಗಲು ರೈತರ ಹಿಂದೇಟು | ಹೆಜ್ಜೆ ಗುರುತು ಪತ್ತೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ತಾಲ್ಲೂಕಿನ ದೊಡ್ಡಮಗ್ಗೆ ಹೋಬಳಿ ಪಾರಸನಹಳ್ಳಿ, ಸಂತೆಮರೂರು ಗ್ರಾಮದ ಜಮೀನಿನಲ್ಲಿ ಚಿರತೆ ಕಾಣಿಸಿಕೊಂಡಿದ್ದು ರೈತರಲ್ಲಿ ಆತಂಕ ಹುಟ್ಟಿಸಿದೆ.

ಸಂತೆಮರೂರು ಕೃಷಿ ಜಮೀನಿನಲ್ಲಿ ಚಿರತೆ ಮರಿಯೊಂದಿಗೆ ಸಂಚಾರ ಮಾಡಿರುವ ಹೆಜ್ಜೆ ಗುರುತು ಪತ್ತೆಯಾಗಿದೆ. ಅಲ್ಲದೆ ಪಾರಸನಹಳ್ಳಿ ಗ್ರಾಮದ ಕೃಷಿ ಜಮೀನಿನಲ್ಲಿಯೂ ಚಿರತೆ ಕಾಣಿಸಿಕೊಂಡಿದೆ. ಅರಣ್ಯ ಇಲಾಖೆಯಿಂದ ಚಿರತೆ ಸೆರೆಗೆ ಬೋನು ಇಡಲಾಗಿದೆ. ಆದರೆ ಚಿರತೆ ಮರಿಯೊಂದಿಗೆ ಅಕ್ಕಪಕ್ಕದ ಗ್ರಾಮಗಳ ಕೃಷಿ ಜಮೀನುಗಳ ಬಳಿ ಒಡಾಡಿರುವ ಹೆಜ್ಜೆ ಗುರುತು ಪತ್ತೆಯಾಗಿದೆ.



ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ಅರಣ್ಯ ಇಲಾಖೆ ಅಧಿಕಾರಿಗಳಾದ ಪ್ರವೀಣ್, ಪಾಷಾ ಮತ್ತು ಸಿಬ್ಬಂದಿ ಚಿರತೆಯ ಹೆಜ್ಜೆ ಗುರುತು ಖಾತ್ರಿಪಡಿಸಿದ್ದಾರೆ. ಅಲ್ಲದೆ ಪಟಾಕಿ ಸಿಡಿಸಿದ್ದಾರೆ. ಸಂತೆಮರೂರು ಸಮೀಪದಲ್ಲಿ ಅರಣ್ಯ ಪ್ರದೇಶವಿದ್ದು, ಚಿರತೆ ಈ ಭಾಗದಲ್ಲಿ ಆಗಾಗ ಕಾಣಿಸಿಕೊಳ್ಳುತ್ತಿದೆ ಎಂದು ರೈತರು ಮಾಹಿತಿ ನೀಡಿದ್ದಾರೆ.

ಹಲವು ವರ್ಷಗಳ ಹಿಂದೆ ಸಂತೆಮರೂರು ಗ್ರಾಮ ಸಮೀಪದ ತೋಟದ ಮನೆಯಿಂದ ಬಾಲಕನನ್ನು ಚಿರತೆ ಹೊತ್ತೋಯ್ದು ಬಲಿತೆಗೆದುಕೊಂಡಿತ್ತು. ಅದಾದ ಹಲವು ವರ್ಷಗಳಲ್ಲಿ ಚಿರತೆ ಈ ಭಾಗದಲ್ಲಿ ಕಾಣಿಸಿಕೊಂಡಿರಲಿಲ್ಲ. ಇತ್ತೀಚಿಗೆ ಸಂತೆಮರೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಚಿರತೆ ಮರಿಯೊಂದಿಗೆ ಕಾಣಿಸಿಕೊಳ್ಳುತ್ತಿರುವುದನ್ನು ಜನರು ಕಣ್ಣಾರೆ ಕಂಡಿದ್ದಾರೆ.

ಕಳೆದ ಐದು ದಿನಗಳ ಹಿಂದೆ ಪಾರಸನಹಳ್ಳಿ ಗ್ರಾಮದ ರೈತರ ಕೊಟ್ಟಿಗೆ ಬಳಿ ಬಂದಿರುವ ಚಿರತೆ ಕೊಟ್ಟಿಗೆ ಬಾಗಿಲು ಹಾಕಿದ್ದರಿಂದ ವಾಪಸ್ ಹೋಗಿದೆ. ಕೊಟ್ಟಿಗೆ ಬಳಿ ಚಿರತೆ ಸುಳಿದಾಡಿರುವ ಹೆಜ್ಜೆ ಗುರುತುಗಳು ಕಂಡುಬಂದಿವೆ. ಅಲ್ಲದೆ ತಾಲ್ಲೂಕಿನ ಕಳ್ಳಿಮುದ್ದನಹಳ್ಳಿ ಹಾಗೂ ಬೂವನಹಳ್ಳಿ ಗ್ರಾಮದಲ್ಲಿ ಚಿರತೆ ಕೃಷಿ ಜಮೀನಿನಲ್ಲಿ ತೊಡಗಿದ್ದ ಮಹಿಳೆ ಸೇರಿ ಐವರ ಮೇಲೆ ಮಾರಣಾಂತಿಕವಾಗಿ ದಾಳಿ ಮಾಡಿದ್ದು, ಇನ್ನೂ ಕೂಡ ಗಾಯಗೊಂಡವರು ಚಿಕಿತ್ಸೆ ಪಡೆಯುತ್ತಿದ್ದಾರೆ. ಗ್ರಾಮದ ತೋಟದ ಮನೆಯಲ್ಲಿದ್ದ ಮತ್ತೋರ್ವ ಮಹಿಳೆ ಮೇಲೆ ದಾಳಿ ಮಾಡಲು ಯತ್ನಿಸಿದ್ದ ಚಿರತೆ ವಾಸದ ಮನೆಯ ಕೊಟ್ಟಿಗೆಗೆ ನುಗ್ಗಿ ಬಂಧಿಯಾಗಿತ್ತು. ಮನೆಯೊಡತಿ ಸಮಯ ಪ್ರಜ್ಞೆಯಿಂದ ಕೊಟ್ಟಿಗೆ ಬಾಗಿಲು ಹಾಕಿದ ಪರಿಣಾಮ ಚಿರತೆ ಬಂಧಿಯಾಗಲು ನೆರವಾಗಿತ್ತು. ಅಂತಿಮವಾಗಿ ಚಿರತೆಗೆ ಅರವಳಿಕೆ ಮದ್ದು ನೀಡಿ ಅರಣ್ಯ ಇಲಾಖೆ ಬಂಧಿಸುವಲ್ಲಿ ಯಶಸ್ವಿಯಾಗಿತ್ತು.

ಹಲವಾರು ದಿನಗಳಿಂದ ಪಾರಸನಹಳ್ಳಿ ಸುತ್ತಮುತ್ತ ಆಹಾರಕ್ಕಾಗಿ ಅಲೆದಾಡುತ್ತಿರುವ ಮರಿಯೊಂದಿಗಿನ ಚಿರತೆ ಜನರಲ್ಲಿ ಜೀವಭಯ ಮೂಡಿಸಿದೆ. ಮಂಗಳವಾರ ಸಂತೆಮರೂರು ಗ್ರಾಮದ ಪ್ರದೀಪ್ ರಾಜೇಅರಸು ಅವರ ಜಮೀನಿನಲ್ಲಿ ಕಾಣಿಸಿಕೊಂಡಿರುವುದು ಅಕ್ಕಪಕ್ಕದಲ್ಲಿ ಹಲವಾರು ಹಳ್ಳಿಗಳಿದ್ದು ರೈತಾಪಿ ವರ್ಗದ ಜನರು ಜಮೀನು ಕೆಲಸಗಳಿಗೆ ತೆರಳಲು ಭಯಪಡುವಂತಾಗಿದೆ. ಯಾವ ಹೊತ್ತಿನಲ್ಲಿ ಮೇಲೆರಗುವುದೋ ಎನ್ನುವ ಭಯ ಜನರಲ್ಲಿ ಮನೆ ಮಾಡಿದೆ.

ಅರಕಲಗೂಡು ಪಟ್ಟಣಕ್ಕೆ ಸಮೀಪವಿರುವ ಪಾರಸನಹಳ್ಳಿ ಗ್ರಾಮದಿಂದ ಚಿರತೆ ಸಂತೆಮರೂರು, ಜೋಡಿಗುಬ್ಬಿ ಅರಣ್ಯ ಪ್ರದೇಶದತ್ತ ಅಲೆದಾಡುತ್ತಿರಬಹುದು ಇಲ್ಲವೇ ಪೊದೆಯಲ್ಲಿ ಅವಿತಿರಬಹುದು. ಬೆಳಿಗ್ಗೆ ಶಿಕ್ಷಕ ಚನ್ನಯ್ಯ ಅವರು ಅರಕಲಗೂಡಿಗೆ ಬೈಕ್‌ನಲ್ಲಿ ಬರುವಾಗ ಚಿರತೆ ಪ್ರತ್ಯಕ್ಷವಾಗಿದೆ.

ಪಾರಸನಹಳ್ಳಿ ಬಳಿ ಕೆಲ ದಿನಗಳ ಹಿಂದೆಯೇ ಚಿರತೆ ಸೆರೆಗೆ ಬೋನು ಇರಿಸಲಾಗಿದೆ. ಚಿರತೆ ಮಾತ್ರ ಪತ್ತೆಯಾಗಿಲ್ಲ. ಸಂತೆಮರೂರು ಗ್ರಾಮದ ಕೃಷಿ ಜಮೀನಿನಲ್ಲಿ ಸಂಚಾರ ಮಾಡಿರುವ ಹೆಜ್ಜೆ ಗುರುತು ಪತ್ತೆಯಾಗಿದೆ. ಆಯಾ ಗ್ರಾಮಗಳ ಕೃಷಿ ಜಮೀನು ಬಳಿ ಪಟಾಕಿ ಸಿಡಿಸಲಾಗಿದೆ. ಚಿರತೆ ಸಂಚಾರ ನಿರಂತರವಾಗಿರುತ್ತದೆ. ಕೃಷಿ ಜಮೀನು ಬಳಿ ಕೆಲಸಕ್ಕೆ ತೆರಳುವ ರೈತರು ಎಚ್ಚರಿಕೆಯಿಂದ ಇರಬೇಕು. ಚಿರತೆ ಸೆರೆಗೆ ಸತತ ಪ್ರಯತ್ನ ನಡೆಸಲಾಗುತ್ತಿದೆ ಎಂದು ಅರಣ್ಯ ಇಲಾಖೆ ಅಧಿಕಾರಿ ಪ್ರವೀಣ್ ಅವರು ತಿಳಿಸಿದರು.

# ಪುರಸಭೆ ಆಸ್ತಿ ಸಂರಕ್ಷಣೆಗೆ ಕ್ರಮ: ಭರವಸೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಪುರಸಭೆಗೆ ಆಸ್ತಿ ಒತ್ತುವರಿ ತೆರವಿಗೆ ಮುಲಾಜಿಲ್ಲದೆ ಕ್ರಮ ಕೈಗೊಳ್ಳಲಾಗುವುದೆಂದು ಪುರಸಭೆ ಅಧ್ಯಕ್ಷ ಅಕ್ರಂ ಷರೀಫ್ ಹೇಳಿದರು.

ಪುರಸಭೆ ವೇಲಾಪುರಿ ಸಭಾಂಗಣದಲ್ಲಿ ನಡೆದ ತುರ್ತು ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಾರ್ವಜನಿಕ ಆಸ್ತಿ ರಕ್ಷಿಸುವುದು ನಮ್ಮ ಕರ್ತವ್ಯ. ಈ ನಿಟ್ಟಿನಲ್ಲಿ ಎಷ್ಟೇ ಒತ್ತಡ ಕೇಳಿಬಂದರೂ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು. ಸದಸ್ಯರ ಸಲಹೆ ಮತ್ತು ಸಹಕಾರದೊಂದಿಗೆ ಪಟ್ಟಣದ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು. ಪುರಸಭೆ ಹಾಗು ತಾಲ್ಲೂಕು ಪಂಚಾಯಿತಿ ಆಸ್ತಿ ಗಡಿಗಳನ್ನು ಅಳತೆ ಮಾಡಿ ಸ್ಪಷ್ಟವಾಗಿ ಗುರುತಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಹೊಳೆಬೀದಿಯ ಜಾಗದ ವಿವಾದ ಸಂಬಂಧ ಸ್ಥಳಕ್ಕೆ ಭೇಟಿ ನೀಡಿ ಅಧಿಕಾರಿಗಳಿಂದ ಮಾಹಿತಿ ಪಡೆಯುತ್ತೇನೆಂದರು.

ಸದಸ್ಯ ಎ.ಆರ್.ಅಶೋಕ್ ಮಾತನಾಡಿ, ಪುರಸಭೆಯ ಹಲವು ಆಸ್ತಿಗಳು ಒತ್ತುವರಿಯಾಗುತ್ತಿದ್ದರೂ ಅಧಿಕಾರಿಗಳು ಕ್ರಮ ಕೈಗೊಳ್ಳುತ್ತಿಲ್ಲ. ಹೊಳೆಬೀದಿಯ ಕೋಳಿ ಅಂಗಡಿ ಹಿಂಭಾಗದಲ್ಲಿರುವ ಸುಮಾರು 1,200 ಚದರ ಅಡಿ ಪುರಸಭೆ ಜಾಗ ಒತ್ತುವರಿಯಾಗಿದ್ದು, ಅದರ ಬಗ್ಗೆ ಮಾಹಿತಿ ಸಂಗ್ರಹಿಸಿ ವಶಪಡಿಸಿಕೊಳ್ಳುವಲ್ಲಿ ವಿಫಲರಾಗಿದ್ದಾರೆಂದು ಅಸಮಾಧಾನ ವ್ಯಕ್ತಪಡಿಸಿದರು.

ಸದಸ್ಯ ಜಗದೀಶ್ ಮಾತನಾಡಿ, ಸಂತೆ ಹಾಗು ದಿನವಹಿ ಸುಂಕದ ಹರಾಜು ಪ್ರಕ್ರಿಯೆ ವಿಳಂಬವಾಗಿರುವುದರಿಂದ ಪುರಸಭೆಗೆ ಸುಮಾರು 3 ಲಕ್ಷ ರೂ. ಆದಾಯ ನಷ್ಟವಾಗಿದೆ. ಕೂಡಲೇ ಟೆಂಡರ್ ಕರೆದು ಹರಾಜು ಪ್ರಕ್ರಿಯೆ ನಡೆಸಬೇಕು. ಕುಡಿಯುವ ನೀರಿನ ಸರಬರಾಜಿನ ಅವಧಿಯನ್ನು ಹೆಚ್ಚಿಸಬೇಕು ಹಾಗು ಕಸ ಸಂಗ್ರಹ ಟಿಪ್ಪರ್‌ಗಳನ್ನು ತ್ವರಿತವಾಗಿ ದುರಸ್ತಿಗೊಳಿಸಬೇಕು ಎಂದು ಒತ್ತಾಯಿಸಿದರು.

ಮತ್ತೊಬ್ಬ ಸದಸ್ಯೆ ತೀರ್ಥಕುಮಾರಿ ವೆಂಕಟೇಶ್ ಮಾತನಾಡಿ, ಸದಸ್ಯರ ಅವಧಿ ಅಂತ್ಯಗೊಳ್ಳುತ್ತಿರುವ ಹಿನ್ನಲೆಯಲ್ಲಿ ಮಳೆಗಾಲಕ್ಕೂ ಮೊದಲೇ ಗುಂಡಿಬಿದ್ದ ರಸ್ತೆ ಮತ್ತು ಹಾಳಾಗಿರುವ ಸ್ಲ್ಯಾಬ್‌ಗಳನ್ನು ದುರಸ್ತಿಗೊಳಿಸಬೇಕು ಎಂದು ಆಗ್ರಹಿಸಿದರು.

ಸದಸ್ಯರಾದ ಶೈಲೇಶ್, ಜಮಾಲುದ್ದೀನ್, ಅಶೋಕ್, ಪ್ರಭಾಕರ್, ಮುಖ್ಯಾಧಿಕಾರಿ ಬಸವರಾಜು ಶಿಗ್ಗಾವಿ ಇತರರಿದ್ದರು.

## ತಂಬಾಕು ಹರಾಜು ಮಾರುಕಟ್ಟೆ ಮುಕ್ತಾಯ

# 211 ಕೋಟಿ ರೂ. ವಹಿವಾಟು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ತಾಲೂಕಿನ ಪ್ರಮುಖ ವಾಣಿಜ್ಯ ಬೆಳೆ ತಂಬಾಕು ಹರಾಜು ವಹಿವಾಟು ಬಹುತೇಕ ಮುಕ್ತಾಯಗೊಂಡಿದ್ದು, 2025-26ನೇ ಸಾಲಿಗೆ 211 ಕೋಟಿ ರೂ. ವಹೀವಾಟು ದಾಖಲಾಗಿದೆ.

ಪ್ರಸಕ್ತ ವರ್ಷದ ಮಾರುಕಟ್ಟೆಯಲ್ಲಿ ವ್ಯಾಪಾರ ವಹಿವಾಟು ಪ್ರಾರಂಭದ ದಿನಗಳಲ್ಲಿ ಉತ್ತಮ ಬೆಲೆ ದೊರಕುತ್ತಿದ್ದು, ಕೇಂದ್ರ ಸರ್ಕಾರವು ತಂಬಾಕು ಉತ್ಪನ್ನಗಳ ಮೇಲೆ ಅಬಕಾರಿ ಸುಂಕವನ್ನು ವಿಧಿಸಿದ ನಂತರ ದಿಢೀರ್ ಕುಸಿತ ಕಂಡಿತು. ಬೆಲೆ ಇಳಿಕೆ ವಿರೋಧಿಸಿ ಅನೇಕ ಪ್ರತಿಭಟನೆಗಳು ನಡೆದು, ಸಂಸದರು ಸೇರಿ ವಿವಿಧ ಜನಪ್ರತಿನಿಧಿಗಳು ಮಾರುಕಟ್ಟೆಗೆ ಭೇಟಿ ನೀಡಿ ತಂಬಾಕು ಬೆಲೆ ಇಳಿಕೆ ಕುರಿತು ವಾಣಿಜ್ಯ ಸಚಿವಾಲಯದ ಗಮನಸೆಳೆದು ಅಬಕಾರಿ ಸುಂಕವನ್ನು ಕಡಿಮೆ ಮಾಡಿ ಬೆಳೆಗಾರರಿಂದ ತಂಬಾಕು ಖರೀದಿಯ ಹೆಚ್ಚು ದೊರಕುವಂತೆ ಕ್ರಮಕ್ಕೈಗೊಳ್ಳುವ ಭರವಸೆ ನೀಡಿದರು ತಂಬಾಕು ಖರೀದಿಯ ಬೆಲೆಯಲ್ಲಿ ಏರಿಕೆ ಕಾಣಲಿಲ್ಲ.

2025-26ನೇ ಸಾಲಿಗೆ ರಾಮನಾಥಪುರದ ಪ್ಲಾಟ್ ಫಾರಂ ಸಂಖ್ಯೆ 7 ರಲ್ಲಿ ಒಟ್ಟು 80786 ಬೇಲ್‌ಗಳಿಂದ 87,33,514 ಕೆಜಿ ತಂಬಾಕು ಮಾರಾಟವಾಗಿದೆ. ಪ್ರತಿ ಕೆಜಿ ಗುಣಮಟ್ಟದ ಪ್ರತಿ ಕೆಜಿ ಹೊಗೆಸೊಪ್ಪಿಗೆ ಗರಿಷ್ಠ 321 ರೂ., ಕನಿಷ್ಠ 50 ರೂ. ಬೆಲೆ ದೊರೆತಿದ್ದು ಮಾರಾಟವಾದ ಪ್ರತಿ ಕೆಜಿ ತಂಬಾಕಿನ ಬೆಲೆ ಸರಾಸರಿ ಬೆಲೆ 242.40 ರೂ. ಸಿಕ್ಕಿದ್ದು, ಒಟ್ಟು 211.69 ಕೋಟಿ ರೂ. ವಹಿವಾಟು ನಡೆದಿದೆ.

ಖರೀದಿಯಲ್ಲಿ 35 ಕಂಪನಿಗಳು: 2025-26ನೇ ಸಾಲಿನಲ್ಲಿ ರಾಮನಾಥಪುರದ ಪ್ಲಾಟ್ ಫಾರಂ ಸಂಖ್ಯೆ 7ರಲ್ಲಿ ನಡೆದ ತಂಬಾಕು ಹರಾಜಿನಲ್ಲಿ 35 ಕಂಪನಿಗಳು ರೈತರಿಂದ ತಂಬಾಕನ್ನು ಕೊಳ್ಳುವ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದವು.

ರಸಗೊಬ್ಬರ ವಿತರಣೆ ಪ್ರಾರಂಭ: ಪ್ರಸಕ್ತ ಸಾಲಿನ ಹೊಗೆಸೊಪ್ಪು ಬೆಳೆಸಲು ಅಗತ್ಯವಿರುವ ರಸಗೊಬ್ಬರಗಳನ್ನು ಮಾರುಕಟ್ಟೆಯಲ್ಲಿ ವಿತರಿಸಲು ಪ್ರಾರಂಭಿಸಿದ್ದು ಬೆಳೆಗಾರರು ತಮ್ಮ ವಾಹನಗಳಲ್ಲಿ ಗೊಬ್ಬರವನ್ನು ಕೊಂಡೊಯ್ಯುತ್ತಿದ್ದಾರೆ. ಬೆಲೆ ಇಳಿಕೆಯ ಜೊತೆಗೆ ಮಂಡಳಿಯು ತಂಬಾಕು ಉತ್ಪಾದನೆ ಕಡಿತಗೊಳಿಸಿದ್ದು, 2026-27ನೇ ಸಾಲಿಗೆ ಸಿಂಗಲ್ ಬ್ಯಾರಲ್ ಪರವಾನಗಿ ಹೊಂದಿರುವ ಬೆಳೆಗಾರರು 1017 ಕೆಜಿ ಮತ್ತು ಡಬಲ್ ಬ್ಯಾರಲ್ ಹೊಂದಿರುವವರು 2034 ಕೆಜಿ ಮಾತ್ರ ಬೆಳೆಯುವಂತೆ ತಂಬಾಕು ಮಂಡಳಿಯು ಪ್ರಕಟಣೆ ಹೊರಡಿಸಿದೆ.

# ಜಿಲ್ಲಾದ್ಯಂತ 20 ಠಾಣೆಯಲ್ಲಿ ರೌಡಿ ನಿಗ್ರಹ ಪಡೆ

## ಅಪರಾಧ ಕೃತ್ಯಕ್ಕೆ ಕಡಿವಾಣ ಹಾಕಲು ಸಿದ್ಧತೆ
## ರೌಡಿಶೀಟರ್‌ಗಳ ಚಲನವಲನದ ಮೇಲೆ ನಿಗಾ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅಪರಾಧ ಸಂಖ್ಯೆ ತಗ್ಗಿಸುವ ನಿಟ್ಟಿನಲ್ಲಿ ರೌಡಿ ನಿಗ್ರಹಕ್ಕೆ ಪ್ರತ್ಯೇಕ ಪಡೆ ಆರಂಭಿಸುವಂತೆ ರಾಜ್ಯ ಪೊಲೀಸ್ ಮಹಾನಿರ್ದೇಶಕರು ಆದೇಶ ಹೊರಡಿಸಿರುವ ಬೆನ್ನಲ್ಲೇ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತಾ ಅವರು ಆ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಂಡಿದ್ದಾರೆ.

ರೌಡಿಗಳ ಚಲನವಲನದ ಮೇಲೆ ಕಣ್ಣಿಟ್ಟಿರುವ ಪೊಲೀಸರಿಗೆ ಸರ್ಕಾರದ ಹೊಸ ಆದೇಶವು ಆನೆಬಲ ನೀಡಿದಂತಾಗಿದೆ. ಪ್ರತಿ ಪೊಲೀಸ್ ವಲಯ, ಠಾಣೆ ಮಟ್ಟದಲ್ಲಿ ರೌಡಿ ನಿಗ್ರಹ ಪಡೆ ಆರಂಭವಾಗಲಿದೆ. ಇರುವ ಸಿಬ್ಬಂದಿಗೆ ಹೆಚ್ಚುವರಿ ಜವಾಬ್ದಾರಿ ವಹಿಸುವ ಕ್ರಮ ಇದಾಗಿದ್ದು ಆ ನಿಟ್ಟಿನಲ್ಲಿ ತರಬೇತಿ ಸಹ ನೀಡಲಾಗುತ್ತಿದೆ. ಜಿಲ್ಲಾದ್ಯಂತ ಒಟ್ಟು 20 ವಿಶೇಷ ರೌಡಿ ನಿಗ್ರಹ ಪಡೆಗಳು ಅಸ್ತಿತ್ವಕ್ಕೆ ಬರಲಿವೆ.

ಬಡ್ಡಿಂಗ್ ರೌಡಿಗಳ ಮೇಲೆ ಕಣ್ಣು: ಇತ್ತೀಚೆಗೆ ಅಪರಾಧ ಲೋಕದ ಕಡೆಗೆ ಆಕರ್ಷಿತರಾಗುತ್ತಿರುವ ಇನ್‌ಸ್ಟಾಗ್ರಾಂ/ಸಾಮಾಜಿಕ ಜಾಲತಾಣದ ಟಬಡ್ಡಿಂಗ್ ರೌಡಿಗಳಟ (ಉದಯೋನ್ಮುಖ ರೌಡಿಗಳು) ಮೇಲೆಯೂ ಪೊಲೀಸ್ ಇಲಾಖೆ ತೀವ್ರ ನಿಗಾ ಇರಿಸಲಿದೆ.

ಜಿಲ್ಲೆಯಿಂದ ಈಗಾಗಲೇ ಗಡಿಪಾರು ಶಿಕ್ಷೆಗೆ ಒಳಗಾಗಿದ್ದರೂ, ಆದೇಶ ಉಲ್ಲಘಿಸಿ ಜಿಲ್ಲೆಯೊಳಗೆ ರಹಸ್ಯವಾಗಿ ಸಂಚರಿಸುತ್ತಿರುವವರ ಪತ್ತೆಗೆ ವಿಶೇಷ ಕಾರ್ಯಾಚರಣೆ ಶೀಘ್ರದಲ್ಲೇ ಆರಂಭವಾಗಲಿದೆ. ತಲೆಮರೆಸಿಕೊಂಡಿರುವ ಅಪರಾಧಿಗಳನ್ನು ಪತ್ತೆ ಹಚ್ಚಿ ಜೈಲಿಗಟ್ಟಲು ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ಜಿಲ್ಲೆಯಲ್ಲಿ ಸದ್ಯಕ್ಕೆ ಸುಮಾರು 70 ರೌಡಿ ಶೀಟರ್‌ಗಳನ್ನು ಗಡಿಪಾರು ಮಾಡಲು ಪಟ್ಟಿ ಸಿದ್ಧಪಡಿಸಲಾಗಿದೆ. ಅವರಲ್ಲಿ ಹಲವರು ಒಂದಕ್ಕಿಂತ ಹೆಚ್ಚು ಕೊಲೆ ಪ್ರಕರಣಗಳಲ್ಲಿ ಭಾಗಿಯಾದ ಹಿನ್ನಲೆಯುಳ್ಳವರಾಗಿದ್ದಾರೆ.



ಅವರ ವಿರುದ್ಧ ಗುಂಡಾ ಕಾಯ್ದೆಯಡಿ ಕ್ರಮ ಜರುಗಿಸುವುದರ ಜೊತೆಗೆ ನ್ಯಾಯಾಲಯದಲ್ಲಿ ಕಠಿಣ ಶಿಕ್ಷೆಯಾಗುವಂತೆ ನೋಡಿಕೊಳ್ಳುವುದು ನಮ್ಮ ಗುರಿ ಎಂದು ಶುಭನ್ವಿತಾ ಅವರು ತಿಳಿಸಿದ್ದಾರೆ.

ರೌಡಿ ಚಟುವಟಿಕೆಗಳು ಸಮಾಜದಲ್ಲಿ ಭಯದ ವಾತಾವರಣ ಸೃಷ್ಟಿಸುತ್ತವೆ ಮತ್ತು ಸಾಮಾಜಿಕ ಸೌಹಾರ್ದತೆ ಹಾಳು ಮಾಡುತ್ತವೆ. ಜೊತೆಗೆ ಸಾರ್ವಜನಿಕ ಶಾಂತಿಗೆ ಧಕ್ಕೆ ಉಂಟು ಮಾಡುತ್ತಿವೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಅಧಿಕಾರ ವಹಿಸಿಕೊಂಡ ತಕ್ಷಣದಲ್ಲೇ ಈ ಮಹತ್ವದ ನಿರ್ಧಾರ ಪ್ರಕಟಿಸಿರುವುದು ಕಾನೂನು ಸುವ್ಯವಸ್ಥೆ ಬಿಗಿಯಾಗುವ ಆಶಯ ಮೂಡಿದೆ.

### ನಿಗ್ರಹ ಪಡೆ ಕೆಲಸ ಏನು

ರೌಡಿ ನಿಗ್ರಹ ದಳವು ಅಪರಾಧ ಪ್ರಕರಣಗಳನ್ನು ಪರಿಶೀಲಿಸಿ, ಹೊಸ ರೌಡಿ ಪಟ್ಟಿ ತೆರೆಯಬೇಕು. ರೌಡಿ ಶೀಟರ್‌ಗಳ ಚಲನವಲನ ಮತ್ತು ಚಟುವಟಿಕೆಗಳ ಮೇಲೆ ನಿಗಾ ವಹಿಸಬೇಕು. ಹೊಸ ರೌಡಿ ಅಂಶಗಳು, ಗ್ಯಾಂಗ್‌ಗಳು ಮತ್ತು ಅಪರಾಧ ಗುಂಪುಗಳನ್ನು ಗುರುತಿಸಿ ಗುಪ್ತಚರ ಮಾಹಿತಿ ಸಂಗ್ರಹಿಸಬೇಕು. ಅಪಾಯ ಪ್ರದೇಶಗಳಲ್ಲಿ ವಿಶೇಷ ಕಾರ್ಯಾಚರಣೆ ಮತ್ತು ದಿಢೀರ್ ತಪಾಸಣೆ ನಿಗ್ರಹ ಪಡೆಯ ಕೆಲಸವಾಗಿದೆ.

ಈ ಹಿಂದೆ ದೊಡ್ಡ ಮಟ್ಟದ ರೌಡಿ ನಿಗ್ರಹ ಕಾರ್ಯಾಚರಣೆಗಳು ಸಿಸಿಬಿ ಅಥವಾ ಸಿಐಡಿಯಂತಹ ಉನ್ನತ ಮಟ್ಟದ ವಿಭಾಗಗಳಿಗೆ ಸೀಮಿತವಾಗಿದ್ದವು. ಈಗ ಪ್ರತಿ ಠಾಣೆ ಮಟ್ಟದಲ್ಲೂ ಪಡೆ ಅಸ್ತಿತ್ವಕ್ಕೆ ಬರುವುದರಿಂದ ಸ್ಥಳೀಯವಾಗಿ ಉದಯೋನ್ಮುಖ ರೌಡಿಗಳು ಅಥವಾ ಸಣ್ಣ-ಪುಟ್ಟ ಗ್ಯಾಂಗ್‌ಗಳು ಬೆಳೆಯುವ ಮುನ್ನವೇ ಅವರನ್ನು ಮಟ್ಟ ಹಾಕಲು ಸಾಧ್ಯವಾಗುತ್ತದೆ. ಈ ವಿಶೇಷ ಪಡೆಗಳು ರೌಡಿಗಳ ವಿರುದ್ಧ ಪ್ರಬಲ ಸಾಕ್ಷ್ಯಗಳನ್ನು ಸಂಗ್ರಹಿಸುವಲ್ಲಿ ಗಮನ ಹರಿಸುವುದರಿಂದ, ನ್ಯಾಯಾಲಯದಲ್ಲಿ ಅವರಿಗೆ ಕಠಿಣ ಶಿಕ್ಷೆಯಾಗುವಂತೆ ನೋಡಿಕೊಳ್ಳಬಹುದು.

ಇತ್ತೀಚಿನ ದಿನಗಳಲ್ಲಿ ಸಾಮಾಜಿಕ ಜಾಲತಾಣಗಳನ್ನು ಬಳಸಿ ಯುವಕರು ರೀಲ್ಸ್ ಮೂಲಕ ರೌಡಿಸಂ ಸಂಸ್ಕೃತಿಗೆ ಆಕರ್ಷಿತರಾಗುತ್ತಿದ್ದಾರೆ. ನಿಗ್ರಹ ಪಡೆ ಸಾಮಾಜಿಕ ಜಾಲತಾಣಗಳ ಮೇಲೂ ನಿಗಾ ಇಡುವುದರಿಂದ ಹಾದಿ ತಪ್ಪುತ್ತಿರುವ ಯುವಕರನ್ನು ಆರಂಭದಲ್ಲೇ ಪತ್ತೆಹಚ್ಚಿ ಕೌನ್ಸಲಿಂಗ್ ನಡೆಸಲು ಮತ್ತು ಕಾನೂನು ಕ್ರಮ ಜರುಗಿಸಲು ನೆರವಾಗುತ್ತದೆ.

# ಸಿಇಟಿಯಲ್ಲಿ ಟೈಮ್ಸ್ ಸಂಸ್ಥೆ ಮಕ್ಕಳ ಸಾಧನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಿಇಟಿ ಪರೀಕ್ಷೆಯಲ್ಲಿ ಚನ್ನರಾಯಪಟ್ಟಣ ಟೈಮ್ಸ್ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳಾದ ಕೆ.ಎ. ದೀಕ್ಷಾ ಹಾಗೂ ಡಿ.ಎಂ. ಹರ್ಷಿತಾ ಉತ್ತಮ ಸಾಧನೆ ಮಾಡಿದ್ದಾರೆ ಟೈಮ್ಸ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಬಿ.ಕೆ. ಗಂಗಾಧರ್ ತಿಳಿಸಿದ್ದಾರೆ.

ಸಿಇಟಿ ಫಲಿತಾಂಶದಲ್ಲಿ ತಾಲ್ಲೂಕಿಗೆ ಪ್ರಥಮ ಸ್ಥಾನ ಪಡೆದಿರುವ ಕೆ.ಎ.ದೀಕ್ಷಾ ಬಿಪಿಟಿಯಲ್ಲಿ 310ನೇ ರ್‍ಯಾಂಕ್, ಎಂಜಿನಿಯರಿಂಗ್‌ನಲ್ಲಿ 3000ನೇ ರ್‍ಯಾಂಕ್ ಪಡೆದುಕೊಂಡಿದ್ದಾರೆ. ಡಿ.ಎಂ. ಹರ್ಷಿತಾ ಬಿಎಸ್ಸಿ ಅಗ್ರಿಯಲ್ಲಿ 1985, ಬಿಎಸ್ಸಿಎಜಿಯಲ್ಲಿ 1033, ಬಿಎಸ್ಸಿ ಫುಡ್ಸೈನ್ಸ್ 1985 ಹಾಗೂ ಎಂಜಿನಿಯರಿಂಗ್‌ನಲ್ಲಿ 4894ನೇ ರ್‍ಯಾಂಕ್ ಪಡೆದುಕೊಂಡಿದ್ದಾರೆ. ವಿದ್ಯಾರ್ಥಿಗಳಿಗೆ ಪಠ್ಯದ ಜೊತೆ ಸಿಇಟಿ, ನೀಟ್ ಮತ್ತು ಜೆಇಇ ಕೋಚಿಂಗ್ ನೀಡಲಾಗುತ್ತಿದ್ದು, ಕಾಲೇಜಿನ ಉಪನ್ಯಾಸಕರೊಂದಿಗೆ ರಾಜ್ಯದ ನುರಿತ ಪರಿಣಿತ ಸಂಪನ್ಮೂಲ ವ್ಯಕ್ತಿಗಳಿಂದ ಕೋಚಿಂಗ್ ನೀಡಲಾಗುತ್ತಿದೆ. ಸುಸಜ್ಜಿತ ಪ್ರಯೋಗಾಲಯ ಸೇರಿ ಉತ್ತಮ ಸೌಲಭ್ಯಗಳು ಕಾಲೇಜಿನಲ್ಲಿದೆ. ಕನ್ನಡ ಮಾಧ್ಯಮದಲ್ಲಿ ವಿದ್ಯಾಭ್ಯಾಸ ಮಾಡಿ ಬಂದ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡುತ್ತಿರುವುದು ಶ್ಲಾಘನೀಯ. ಕಾಲೇಜಿನ ಪ್ರಾಂಶುಪಾಲ ಸುನೀಲ್ ಕುಮಾರ್ ಅವರ ನೇತೃತ್ವದಲ್ಲಿ ಗುಣಮಟ್ಟದ ಉಪನ್ಯಾಸಕರ ತಂಡ ಕಾಲೇಜಿನಲ್ಲಿ ಕಾರ್ಯನಿರ್ವಹಣೆ ಮಾಡುತ್ತಿರುವುದು ಈ ಎಲ್ಲಾ ಸಾಧನೆಗೆ ಕಾರಣವಾಗಿದೆ ಎಂದು ತಿಳಿಸಿದ್ದಾರೆ.

# ಇತಿಹಾಸದಲ್ಲಿ ಈ ದಿನ

## ಜೂನ್-11

1509: ಇಂಗ್ಲೆಂಡ್‌ನ ರಾಜ ಹೆನ್ರಿ ಎಂಟನೇ ಅವರು ಕ್ಯಾಥರಿನ್ ಆಫ್ ಅರಗಾನ್ ಅವರನ್ನು ವಿವಾಹವಾದರು.

1963: ಅಮೆರಿಕದ ಅಲಬಾಮಾ ವಿಶ್ವವಿದ್ಯಾಲಯದಲ್ಲಿ ಮೊದಲ ಬಾರಿಗೆ ಆಫ್ರಿಕನ್-ಅಮೆರಿಕನ್ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಯಿತು. ಇದು ನಾಗರಿಕ ಹಕ್ಕುಗಳ ಚಳವಳಿಯ ಪ್ರಮುಖ ಘಟ್ಟವಾಗಿತ್ತು.

1963: ಜಾರ್ಜ್ ವಾಲೆಸ್ ಅವರ ವರ್ಣಭೇದ ನೀತಿಗೆ ವಿರೋಧವಾಗಿ ಅಮೆರಿಕ ಸರ್ಕಾರ ಕ್ರಮ ಕೈಗೊಂಡಿತು.

2001: ಅಮೆರಿಕದ ಒಕ್ಲಹೋಮಾ ಸಿಟಿ ಬಾಂಬ್ ಸ್ಫೋಟ ಪ್ರಕರಣದ ಅಪರಾಧಿ ಟಿಮೋತಿ ಮೆಕ್‌ವೇ ಅವರಿಗೆ ಮರಣದಂಡನೆ ಜಾರಿಗೊಳಿಸಲಾಯಿತು.

2010: ಫಿಫಾ ವರ್ಲ್ಡ್ ಕಪ್ ದಕ್ಷಿಣ ಆಫ್ರಿಕಾದಲ್ಲಿ ಆರಂಭವಾಯಿತು. ಇದು ಆಫ್ರಿಕಾ ಖಂಡದಲ್ಲಿ ನಡೆದ ಮೊದಲ ಫುಟ್‌ಬಾಲ್ ವಿಶ್ವಕಪ್ ಆಗಿತ್ತು.

### ಜನನ

1910: ಜಾಕ್ ಕೂಸ್ಟೋ, ಪ್ರಸಿದ್ಧ ಸಮುದ್ರ ಸಂಶೋಧಕ

1969: ಪೀಟರ್ ಡಿಂಕ್ಲೇಜ್, ಖ್ಯಾತ ನಟ

# ಕಾಫಿ ಬೆಳೆಗಾರರ ಸಮಸ್ಯೆ ಪರಿಹಾರಕ್ಕೆ ನಿರಂತರ ಪ್ರಯತ್ನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಕಾಫಿ ಬೆಳೆಗಾರರ ಸಮಸ್ಯೆಗಳ ವಿಚಾರ ಬಂದಾಗ ಸದಾ ಅವರ ಪರವಾಗಿ ನಿಲ್ಲುವುದರ ಜೊತೆಗೆ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಪರಿಹಾರ ದೊರಕಿಸಲು ನಿರಂತರ ಪ್ರಯತ್ನ ಮಾಡುವುದಾಗಿ ಬೇಲೂರು ಶಾಸಕ ಹೆಚ್.ಕೆ.ಹುಲ್ಲಹಳ್ಳಿ ಸುರೇಶ್ ಭರವಸೆ ನೀಡಿದರು.

ಪಟ್ಟಣದ ಎಚ್‌ಡಿಪಿಎ ಸಭಾಂಗಣದಲ್ಲಿ ನಡೆದ ಜಿಲ್ಲಾ ಪ್ಲಾಂಟರ್ಸ್ ಸಂಘದ 202628ನೇ ಸಾಲಿನ ಪ್ರಥಮ ಕಾರ್ಯಕಾರಿ ಮಂಡಳಿ ಸಭೆಯಲ್ಲಿ ಮಾತನಾಡಿ, ಮಲೆನಾಡಿನ ಕಾಫಿ ಬೆಳೆಗಾರರು ರಾಜ್ಯದ ಆರ್ಥಿಕತೆಗೆ ಮಹತ್ವದ ಕೊಡುಗೆ ನೀಡುತ್ತಿದ್ದು, ಅವರಿಗೆ ಹಿಂದಿನ ದಿನಗಳಲ್ಲಿ ದೊರೆಯುತ್ತಿದ್ದ ಗೌರವ ಹಾಗೂ ಪ್ರೋತ್ಸಾಹ ಮರಳಿ ನೀಡುವ ಅಗತ್ಯವಿದೆ ಎಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಕಾಡಾನೆ ಹಾವಳಿ,



ಬೆಳೆ ನಷ್ಟ ಹಾಗೂ ಕೃಷಿ ಸಂಬಂಧಿತ ವಿವಿಧ ಸಮಸ್ಯೆಗಳಿಂದ ಬೆಳೆಗಾರರು ಸಂಕಷ್ಟ ಅನುಭವಿಸುತ್ತಿದ್ದಾರೆ. ಜಿಲ್ಲೆಯ ನಾಲ್ಕು ತಾಲ್ಲೂಕುಗಳ ಬೆಳೆಗಾರರು ಒಗ್ಗಟ್ಟಾಗಿ ತಮ್ಮ ಸಮಸ್ಯೆಗಳನ್ನು ಸರ್ಕಾರದ ಮುಂದೆ ಮಂಡಿಸಿದರೆ ಶೀಘ್ರ ಪರಿಹಾರ ದೊರೆಯುತ್ತದೆ ಎಂದು ಅಭಿಪ್ರಾಯಪಟ್ಟರು.

ಬೆಳೆಗಾರರ ಅನುಭವ, ಸಲಹೆ ಹಾಗೂ ಸಮಸ್ಯೆಗಳನ್ನು ಸದನದ ಒಳಗೆ ಮತ್ತು ಹೊರಗೆ ಪ್ರಸ್ತಾಪಿಸುವ ಮೂಲಕ ರೈತರ ಹಿತಾಸಕ್ತಿಗೆ ಸಂಬಂಧಿಸಿದ ವಿಷಯಗಳಲ್ಲಿ ಸರ್ಕಾರದ ಗಮನ ಸೆಳೆಯುವ ಕಾರ್ಯವನ್ನು ಮುಂದುವರಿಸುವುದಾಗಿ ತಿಳಿಸಿದರು.

ಸಭೆಯಲ್ಲಿ ಎಚ್‌ಡಿಪಿಎ ಮಾಜಿ ಅಧ್ಯಕ್ಷ ಪ್ರಸನ್ನ ಎಂ. ಬಿಟ್ಟೇಶ್ವರ ಕಾರ್ಯಕಾರಿ ಮಂಡಳಿ ಸದಸ್ಯರಿಗೆ ಸಭಾ ಶಿಷ್ಟಾಚಾರ, ಸಂಸದೀಯ ಕಾರ್ಯವಿಧಾನಗಳು ಹಾಗೂ ಸಂಘಟನಾ ನಿರ್ವಹಣೆಯ ಕುರಿತು ಮಾರ್ಗದರ್ಶನ ನೀಡಿದರು.

ಸಂಘದ ಬಲವರ್ಧನೆಗೆ ಸದಸ್ಯರ ಸಕ್ರಿಯ ಭಾಗವಹಿಸುವಿಕೆ ಮತ್ತು ಜವಾಬ್ದಾರಿಯುತ ಕಾರ್ಯನಿರ್ವಹಣೆ ಅಗತ್ಯ ಎಂದು ಹೇಳಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಪ್ಲಾಂಟರ್ಸ್ ಸಂಘದ ಅಧ್ಯಕ್ಷ ಅರೇಹಳ್ಳಿ ಮಂಜುನಾಥ್ ಶೆಟ್ಟಿ ಮಾತನಾಡಿ, ವರ್ಷಕ್ಕೆ ಕನಿಷ್ಠ ನಾಲ್ಕು ಪ್ರಮುಖ ಕಾರ್ಯಕ್ರಮಗಳನ್ನು ಆಯೋಜಿಸುವ ಉದ್ದೇಶ ಹೊಂದಿದ್ದು, ಕಾಳುಮೆಣಸು ವಿಚಾರ ಸಂಕಿರಣ, ಕಾಫಿ ದಿನಾಚರಣೆ ಹಾಗೂ ಕೃಷಿ ಅಧ್ಯಯನ ಪ್ರವಾಸ ಸೇರಿ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದರು.

ಮುಂದಿನ ವರ್ಷ ಸಂಘ ಸ್ಥಾಪನೆಯ ಸುವರ್ಣ ಮಹೋತ್ಸವವನ್ನು ಅದ್ಧೂರಿಯಾಗಿ ಆಚರಿಸುವ ಯೋಜನೆ ರೂಪಿಸಲಾಗಿದ್ದು, ಮುಖ್ಯಮಂತ್ರಿ ಹಾಗೂ ಡಿ. ವೀರೇಂದ್ರ ಹೆಗ್ಗಡೆ ಅವರನ್ನು ಆಹ್ವಾನಿಸುವ ಚಿಂತನೆ ಇದೆ ಎಂದು ತಿಳಿಸಿದರು.

ನಿವೃತ್ತ ಕಾಫಿ ಮಂಡಳಿಯ ಜಂಟಿ ನಿರ್ದೇಶಕ ನವೀನ್ ಕುಮಾರ್ ಹಾಗೂ ಜಿಲ್ಲಾ ಪ್ಲಾಂಟರ್ಸ್ ಸಂಘದ ಚುನಾವಣಾಧಿಕಾರಿಯಾಗಿ ಸೇವೆ ಸಲ್ಲಿಸಿದ್ದ ಕೆಜಿಎಫ್ ಮಾಜಿ ಅಧ್ಯಕ್ಷ ಮೋಹನ್ ಮತ್ತು ಮಾಜಿ ಕಾರ್ಯದರ್ಶಿ ಕೆ.ಬಿ. ಕೃಷ್ಣಪ್ರಸಾದ್ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಗೌರವ ಕಾರ್ಯದರ್ಶಿ ಹೆಗ್ಗೋವೆ ಪುಟ್ಟರಾಜ್, ಖಜಾಂಚಿ ಡಿ.ಎಸ್. ಲೋಕೇಶ್, ಜಂಟಿ ಕಾರ್ಯದರ್ಶಿ ಹೆಚ್.ಎ.ರವಿಕುಮಾರ್, ಸಂಘಟನಾ ಕಾರ್ಯದರ್ಶಿ ಹೆಚ್.ಎಂ. ಮಂಜುನಾಥ್ ಮತ್ತಿತರರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248